# ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿಯಮಿತ

[ಷೆಡ್ಯೂಲ್ಡ್ ಬ್ಯಾಂಕ್]

"ಉತ್ತುಂಗ".ನಂ.1, ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – 560018.

ಸಂಖ್ಯೆ:ಮುಕಾನಿ/ಸಿವಿ/ನೇಮಕಾತಿ/4142/2016–17 ದಿನಾಂಕ:14.11.2016

## ಪ್ರಕಟಣೆ

ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿ., ಬೆಂಗಳೂರು, ಇದರಲ್ಲಿ ಖಾಲಿಯಿರುವ ಗುಮಾಸ್ತರು–ಹಾಗೂ–ನಗದು ಗುಮಾಸ್ತರ ಹುದ್ದೆಗಳ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಖುದ್ದಾಗಿ/ಅಂಚೆ/ಕೊರಿಯರ್ ಇತ್ಯಾದಿ ಮೂಲಕ ಕಳುಹಿಸಲು ಅವಕಾಶವಿರುವುದಿಲ್ಲ. ಹುದ್ದೆಗಳ ವಿವರವು ಈ ಕೆಳಕಾಣಿಸಿದಂತಿದೆ.

**I. <u>ಹುದ್ದೆಯ ವಿವರ:</u>**

| ವರ್ಗಗಳ ವಿವರ | ಮಹಿಳಾ ಅಭ್ಯರ್ಥಿ | ಮಾಜಿ ಸೈನಿಕರು | ಅಂಗವಿಕಲರು | ಯೋಜನಾ ನಿರಾಶ್ರಿತರು | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | ಇತರೆ | ಒಟ್ಟು |
|---|---|---|---|---|---|---|---|---|
| ಸಾಮಾನ್ಯ | 13 | 5 | 2 | 2 | 11 | 2 | 10 | 45 |
| ಪರಿಶಿಷ್ಟ ಜಾತಿ | 4 | 1 | 1 | 1 | 4 | 1 | 2 | 14 |
| ಪರಿಶಿಷ್ಟ ಪಂಗಡ | 1 | 0 | 0 | 0 | 1 | 0 | 0 | 2 |
| ಪ್ರವರ್ಗ–1 | 1 | 1 | 0 | 0 | 0 | 0 | 1 | 3 |
| ಪ್ರವರ್ಗ–2ಎ | 5 | 1 | 1 | 1 | 3 | 1 | 2 | 14 |
| ಪ್ರವರ್ಗ–2ಬಿ | 1 | 1 | 0 | 0 | 0 | 0 | 1 | 3 |
| ಪ್ರವರ್ಗ–3ಎ | 1 | 1 | 0 | 0 | 1 | 0 | 1 | 4 |
| ಪ್ರವರ್ಗ–3ಬಿ | 2 | 0 | 0 | 0 | 1 | 1 | 1 | 5 |
| **ಒಟ್ಟು** | **28** | **10** | **4** | **4** | **21** | **5** | **18** | **90** |

**<u>ಹೈದರಾಬಾದ್–ಕರ್ನಾಟಕ ವ್ಯಾಪ್ತಿಗೆ ಒಳಪಡುವ ಜಿಲ್ಲೆಗಳ ಅಭ್ಯರ್ಥಿಗಳಿಗೆ ಮೀಸಲಾತಿ:</u>**

| | | | | | | | | |
|---|---|---|---|---|---|---|---|---|
| ಸಾಮಾನ್ಯ | 1 | 0 | 1 | 0 | 1 | 0 | 0 | 3 |
| ಪರಿಶಿಷ್ಟ ಜಾತಿ | 1 | 0 | 0 | 0 | 0 | 0 | 1 | 2 |
| ಪರಿಶಿಷ್ಟ ಪಂಗಡ | 0 | 0 | 0 | 0 | 0 | 0 | 1 | 1 |
| ಪ್ರವರ್ಗ–1 | 0 | 0 | 0 | 0 | 0 | 0 | 1 | 1 |
| ಪ್ರವರ್ಗ–2ಎ | 0 | 0 | 0 | 0 | 0 | 0 | 1 | 1 |
| **ಒಟ್ಟು** | **2** | **0** | **1** | **0** | **1** | **0** | **4** | **8** |
| **ಕ್ರೋಢೀಕೃತ ಒಟ್ಟು ಹುದ್ದೆಗಳು** | **30** | **10** | **5** | **4** | **22** | **5** | **22** | **98** |

<u>ವೇತನ ಶ್ರೇಣಿ:</u>15330–515–17905–700–20005–705–22120–960–25960–970–26930–1120–33650–1200–36050–1205–46895 ಮತ್ತು ನಿಯಮಗಳ ಪ್ರಕಾರ ಗ್ರಾಹ್ಯವಾದ ಭತ್ಯೆಗಳು

## II. ವಿದ್ಯಾರ್ಹತೆ

### 1) ಗುಮಾಸ್ತರು–ಹಾಗೂ–ನಗದು ಗುಮಾಸ್ತರು

ಅರ್ಜಿ ಸಲ್ಲಿಸಲು ಸಾಮಾನ್ಯ ಮತ್ತು ಹಿಂದುಳಿದ ವರ್ಗಗಳ ಅಭ್ಯರ್ಥಿಗಳು ಪದವಿ ಪರೀಕ್ಷೆಯಲ್ಲಿ ಪಡೆದ ಕ್ರೋಢೀಕೃತ ಒಟ್ಟು ಅಂಕಗಳ ಕನಿಷ್ಟ ಸರಾಸರಿ ಶೇಕಡ 60 ಅಂಕಗಳೊಂದಿಗೆ ಹಾಗೂ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಕನಿಷ್ಟ ಶೇಕಡ 50 ಅಂಕಗಳೊಂದಿಗೆ ಅಂಗೀಕೃತ ವಿಶ್ವವಿದ್ಯಾನಿಲಯದ ಬಿ.ಎ./ಬಿ.ಎ.(ಸಹಕಾರ)/ಬಿ.ಎಸ್ಸಿ./ಬಿ.ಕಾಂ./ ಬಿ.ಬಿ.ಎಂ./ಬಿ.ಸಿ.ಎ. ಪದವಿ ಅಥವಾ ಬಿ.ಇ.ಕಂಪ್ಯೂಟರ್ ಸೈನ್ಸ್/ಇನ್‌ಫಾರ್ಮೇಷನ್ ಸೈನ್ಸ್ ಪದವಿ ಹೊಂದಿರಬೇಕು. ಅಭ್ಯರ್ಥಿಗಳು ಸ್ನಾತಕೋತ್ತರ ಪದವೀಧರರಾಗಿದ್ದಲ್ಲಿ ಅವರು ಪದವಿಯಲ್ಲಿ ಪಡೆದ ಕ್ರೋಢೀಕೃತ ಒಟ್ಟು ಅಂಕಗಳ ಸರಾಸರಿ ಅಂಕಗಳನ್ನು ಮಾತ್ರ ಆಧರಿಸಿ, ಅರ್ಹತೆಗೆ ಪರಿಗಣಿಸಲಾಗುವುದು. ಅಭ್ಯರ್ಥಿಗಳು ಕಂಪ್ಯೂಟರ್‌ನಲ್ಲಿ ಕಾರ್ಯನಿರ್ವಹಿಸಲು ಸಾಮಾನ್ಯ ಜ್ಞಾನ ಹೊಂದಿರಬೇಕು.

## III. ಹುದ್ದೆಗಳ ಸಂಖ್ಯೆ

ಪ್ರಸ್ತುತ ಒಟ್ಟು ಹುದ್ದೆಗಳ ಸಂಖ್ಯೆ 98 ಇರುತ್ತವೆ.

## IV. ಆಯ್ಕೆ ವಿಧಾನ:

ಅಭ್ಯರ್ಥಿಗಳ ಆಯ್ಕೆಯನ್ನು, ಅವರುಗಳು ಸಲ್ಲಿಸಿರುವ ಅರ್ಜಿಗಳ ಪರಿಶೀಲನೆ ನಂತರ ಅರ್ಹ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆ ಮತ್ತು ಸಂದರ್ಶನದ ಮೂಲಕ ಮಾಡಲಾಗುತ್ತದೆ. ಪದವಿ ಪರೀಕ್ಷೆಗಳಲ್ಲಿ ಪಡೆದ ಒಟ್ಟು ಅಂಕಗಳ ಶೇಕಡಾ ಪ್ರಮಾಣದ ಅರ್ಹತೆ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆ ನಡೆಸಲಾಗುವುದು.

ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಅರ್ಹತೆ ಆಧಾರದ ಮೇಲೆ ಅಭ್ಯರ್ಥಿಗಳನ್ನು 1:5ರ ಅನುಪಾತದಲ್ಲಿ ಮೌಖಿಕ ಸಂದರ್ಶನಕ್ಕೆ ಆಹ್ವಾನಿಸಲಾಗುವುದು. ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇಕಡ 85ಕ್ಕೆ ಲೆಕ್ಕಾಚಾರ ಮಾಡಲಾಗುವುದು ಹಾಗೂ ಮೌಖಿಕ ಸಂದರ್ಶನಕ್ಕೆ 15 ಅಂಕಗಳನ್ನು ನಿಗದಿಪಡಿಸಿದೆ.

## V. ವಯೋಮಿತಿ

ದಿನಾಂಕ 15.12.2016 ರಲ್ಲಿದ್ದಂತೆ ಅಭ್ಯರ್ಥಿಗಳಿಗೆ ಕನಿಷ್ಠ 18 ವರ್ಷ ವಯಸ್ಸು ತುಂಬಿರಬೇಕು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ–1ರ ಅಭ್ಯರ್ಥಿಗಳು 40 ವರ್ಷಗಳನ್ನು ಮೀರಿರಬಾರದು. ಇತರೆ ಹಿಂದುಳಿದ ಜಾತಿ/ಹಿಂದುಳಿದ ವರ್ಗಗಳ ಅಂದರೆ ಪ್ರವರ್ಗ–2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು 38 ವರ್ಷಗಳನ್ನು ಮೀರಿರಬಾರದು ಹಾಗೂ ಸಾಮಾನ್ಯ ವರ್ಗದ ಅಭ್ಯರ್ಥಿಗಳು 35 ವರ್ಷಗಳನ್ನು ಮೀರಿರಬಾರದು.

## VI. ಅರ್ಜಿ ನಮೂನೆ ಮತ್ತು ಅರ್ಜಿ ಶುಲ್ಕ

(ಅ) ಅರ್ಹ ಅಭ್ಯರ್ಥಿಗಳು ನಿಗದಿಪಡಿಸಿದ ಅರ್ಜಿ ನಮೂನೆಗಳನ್ನು ಬ್ಯಾಂಕಿನ ವೆಬ್‌ಸೈಟ್‌ನಿಂದ (website:www.karnatakaapex.com) ಡೌನ್‌ಲೋಡ್ ಮಾಡಿಕೊಳ್ಳಬಹುದು.

(ಆ) **ಅರ್ಜಿ ಶುಲ್ಕ:**

| | |
|---|---|
| ಸಾಮಾನ್ಯ ಅರ್ಹತೆ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ)ಗೆ ಸೇರಿದ ಅಭ್ಯರ್ಥಿಗಳಿಗೆ | ರೂ.500/– |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ | ರೂ.250/– |

**ಅರ್ಜಿ ಶುಲ್ಕವನ್ನು ಪಾವತಿಸುವ ವಿಧಾನ:**

ಅರ್ಜಿ ಶುಲ್ಕವನ್ನು ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್/ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಿಂದ ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿ, ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿಯಮಿತ, ಬೆಂಗಳೂರು, ಇವರ ಹೆಸರಿಗೆ ಡಿಡಿ/ಪೇ–ಆರ್ಡರ್ ಪಡೆದು ಆನ್‌ಲೈನ್ ಅರ್ಜಿಯಲ್ಲಿ ಡಿ.ಡಿ./ಪೇ–ಆರ್ಡರ್ ಸಂಖ್ಯೆ, ದಿನಾಂಕ, ಬ್ಯಾಂಕಿನ ಹೆಸರು ನಮೂದಿಸಬೇಕು ಮತ್ತು ಅರ್ಜಿಯ ಪ್ರತಿ ಜೊತೆಗೆ ಲಗತ್ತಿಸಿ ಅಪೆಕ್ಸ್ ಬ್ಯಾಂಕಿಗೆ ಸಲ್ಲಿಸಬೇಕು. ಕೋಲಾರ, ಚಿಕ್ಕಬಳ್ಳಾಪುರ, ಧಾರವಾಡ, ಹಾವೇರಿ, ಗದಗ, ಗುಲ್ಬರ್ಗಾ, ಯಾದಗಿರ್, ರಾಯಚೂರು, ಕೊಪ್ಪಳ ಹಾಗೂ ಶಿವಮೊಗ್ಗ ಜಿಲ್ಲೆಗಳ ವ್ಯಾಪ್ತಿಯಲ್ಲಿರುವ ಅರ್ಜಿದಾರರು ಬೆಂಗಳೂರಿನಲ್ಲಿ ನಗದೀಕರಣಗೊಳಿಸಬಹುದಾದ ರಾಷ್ಟ್ರೀಕೃತ ಬ್ಯಾಂಕಿನ ಡಿ.ಡಿ./ಪೇ–ಆರ್ಡರ್‌ಗಳ ಮೂಲಕ ಅರ್ಜಿ ಶುಲ್ಕವನ್ನು ಪಾವತಿಸಬಹುದು.

(ಇ) ಅರ್ಹ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆ ಮತ್ತು ಮೌಖಿಕ ಸಂದರ್ಶನ ಕುರಿತು ವಿವರಗಳನ್ನು ಬ್ಯಾಂಕಿನ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು (**website:www.karnatakaapex.com**) ಹಾಗೂ ಲಿಖಿತ ಪರೀಕ್ಷೆ/ಸಂದರ್ಶನಕ್ಕೆ ಹಾಜರಾಗಲು ಅರ್ಹ ಅಭ್ಯರ್ಥಿಗಳಿಗೆ ಸೂಚನಾ ಪತ್ರವನ್ನು ನೇರವಾಗಿ ಕಳುಹಿಸಲಾಗುವುದು.

VII. **ಸಾಮಾನ್ಯ ಸೂಚನೆಗಳು:**

(ಅ) ಅರ್ಜಿಯನ್ನು ಅವಶ್ಯ ದಾಖಲಾತಿಗಳೊಂದಿಗೆ ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡಿದ ಬಳಿಕ ಅರ್ಜಿಯ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ಈ ಕೆಳಕಾಣಿಸಿದ ಅಗತ್ಯ ಪ್ರಮಾಣ ಪತ್ರಗಳೊಂದಿಗೆ ಹಾಗೂ ಅರ್ಜಿ ಶುಲ್ಕದ ಪಾವತಿಗೆ ಸಂಬಂಧಿಸಿದಂತೆ, ಡಿಡಿ/ಪೇಆರ್ಡರ್ ಲಗತ್ತಿಸಿ ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿ, ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿಯಮಿತ, ಬೆಂಗಳೂರು, ಇವರಿಗೆ ಸಲ್ಲಿಸಬೇಕು. ಆದಾಗ್ಯೂ, ಅರ್ಜಿದಾರರು ತಪ್ಪು ಮಾಹಿತಿ ನೀಡಿದ್ದಲ್ಲಿ/ಸಮರ್ಪಕ ಮಾಹಿತಿ ನೀಡದಿದ್ದಲ್ಲಿ ಅಂತಹ ಅರ್ಜಿಗಳು ತಿರಸ್ಕೃತವಾಗುತ್ತವೆ.

(1)ಅಭ್ಯರ್ಥಿಗಳು ಅಂಗೀಕೃತ ವಿಶ್ವ ವಿದ್ಯಾನಿಲಯದಿಂದ ಪಡೆದ ಪದವಿಯ ಎಲ್ಲಾ ವರ್ಷಗಳ/ಸೆಮಿಸ್ಟರ್‌ಗಳ ಸ್ವಯಂ ದೃಢೀಕೃತ ಅಂಕಪಟ್ಟಿಗಳು.

(2)ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು–ಪ್ರಸ್ತುತ ಚಾಲ್ತಿಯಲ್ಲಿರುವ ನಿಬಂಧನೆಗೊಳಪಟ್ಟು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ – ನಮೂನೆ 'ಡಿ'

(3)ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳು–ಪ್ರಸ್ತುತ ಚಾಲ್ತಿಯಲ್ಲಿರುವ ನಿಬಂಧನೆಗೊಳಪಟ್ಟು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ– ನಮೂನೆ 'ಇ'

(4)ಇತರೆ ಹಿಂದುಳಿದ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು–ಪ್ರಸ್ತುತ ಚಾಲ್ತಿಯಲ್ಲಿರುವ ನಿಬಂಧನೆಗೊಳಪಟ್ಟು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ– ನಮೂನೆ 'ಎಫ್'

(5)ದೈಹಿಕ ಅಂಗವಿಕಲ ಅಭ್ಯರ್ಥಿಗಳು–ಪ್ರಸ್ತುತ ಚಾಲ್ತಿಯಲ್ಲಿರುವ ನಿಬಂಧನೆಗೊಳಪಟ್ಟು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.

(6)ಗ್ರಾಮೀಣ ಖೋಟಾ ಅಡಿಯಲ್ಲಿ ಅರ್ಜಿ ಸಲ್ಲಿಸುವ ಸಾಮಾನ್ಯ ಅರ್ಹತೆಗೆ ಸೇರಿದ ಅಭ್ಯರ್ಥಿಗಳು– ಕೆನೆಪದರಕ್ಕೆ(creamy layer) ತಾವು ಸೇರಿಲ್ಲದಿರುವ ಬಗ್ಗೆ ಘೋಷಣೆ– ನಮೂನೆ– 1

(7)ಗ್ರಾಮೀಣ ಅಭ್ಯರ್ಥಿಗಳು–ಪ್ರಸ್ತುತ ಚಾಲ್ತಿಯಲ್ಲಿರುವ ನಿಬಂಧನೆಗೊಳಪಟ್ಟು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ– ನಮೂನೆ–2

(8)ವಿವಿಧ ಯೋಜನೆಗಳಡಿಯಲ್ಲಿ ನಿರಾಶ್ರಿತರ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು–ಪ್ರಸ್ತುತ ಚಾಲ್ತಿಯಲ್ಲಿರುವ ನಿಬಂಧನೆಗೊಳಪಟ್ಟು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ– ನಮೂನೆ–3

(9)ಕನ್ನಡ ಮಾಧ್ಯಮದ ಅಭ್ಯರ್ಥಿಗಳು–ಶಾಲೆಯಲ್ಲಿ 1 ರಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ಓದಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಮೊಹರು ಸಹಿತ ಪಡೆದ ಪ್ರಮಾಣ ಪತ್ರ.

(10)ಹೈದರಾಬಾದ್–ಕರ್ನಾಟಕ ವ್ಯಾಪ್ತಿಗೆ ಬರುವ ಜಿಲ್ಲೆಗಳ ಅಭ್ಯರ್ಥಿಗಳು– ಮೀಸಲಾತಿ ಕುರಿತು–ಸಕ್ಷಮ ಪ್ರಾಧಿಕಾರದಿಂದ ಪಡೆದ ಅಗತ್ಯ ಪ್ರಮಾಣ ಪತ್ರ– ಅನುಬಂಧ–ಎ

(11)ಅಭ್ಯರ್ಥಿಗಳು ಇಬ್ಬರು ಸ್ಥಳೀಯ ಗಣ್ಯ ವ್ಯಕ್ತಿಗಳಿಂದ ಗುಣ ನಡತೆಯ ಬಗ್ಗೆ ಪಡೆದ ಪ್ರಮಾಣ ಪತ್ರ.

(ಆ)ಲಿಖಿತ ಪರೀಕ್ಷೆ/ಸಂದರ್ಶನಕ್ಕೆ ಕರೆಯಲ್ಪಟ್ಟ ಅಭ್ಯರ್ಥಿಗಳು ತಮ್ಮ ಸ್ವಂತ ವೆಚ್ಚದಲ್ಲಿ ಹಾಜರಾಗಬೇಕು. ಯಾವುದೇ ಪ್ರಯಾಣ ಭತ್ಯೆ/ದಿನ ಭತ್ಯೆಗಳನ್ನು ನೀಡಲಾಗುವುದಿಲ್ಲ.

(ಇ)ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಸಂದರ್ಭದಲ್ಲಿಯೂ ಯಾವುದೇ ಕಾರಣವನ್ನು ನೀಡದೇ ರದ್ದುಗೊಳಿಸುವ ಅಧಿಕಾರವನ್ನು ಬ್ಯಾಂಕು ಹೊಂದಿರುತ್ತದೆ. ಆ ರೀತಿ ನೇಮಕಾತಿ ಪ್ರಕ್ರಿಯೆಯನ್ನು ರದ್ದುಗೊಳಿಸಿದ ಸಂದರ್ಭದಲ್ಲಿ ಮಾತ್ರ ಅರ್ಜಿದಾರರು ಪಾವತಿಸಿದ ಅರ್ಜಿ ಶುಲ್ಕವನ್ನು ಹಿಂದಿರುಗಿಸಲಾಗುವುದು.

(ಈ)ನೇಮಕಾತಿ ಪ್ರಕ್ರಿಯೆಯು ಕರ್ನಾಟಕ ಸರ್ಕಾರವು ಕಾಲಕಾಲಕ್ಕೆ ನೀಡುವ ನಿರ್ದೇಶನಗಳಿಗೆ/ಆದೇಶಗಳಿಗೆ ಒಳಪಟ್ಟಿರುತ್ತದೆ.

(ಉ)ಆಯ್ಕೆಗೊಂಡ ಅಭ್ಯರ್ಥಿಗಳು ಬ್ಯಾಂಕು ನಿಗದಿಪಡಿಸಿದ ಕಂಪ್ಯೂಟರ್ ಜ್ಞಾನ ಹೊಂದಿರದಿದ್ದಲ್ಲಿ, ಅಂತಹ ಅಭ್ಯರ್ಥಿಗಳು ತಮ್ಮ ಪರೀಕ್ಷಾರ್ಥ ಸೇವಾವಧಿಯಲ್ಲಿ, ಎಂ.ಎಸ್.ವಿಂಡೊ ಅಥವಾ ತತ್ಸಮಾನ ಗಣಕಯಂತ್ರ ತರಬೇತಿ ಪಡೆದು ಪ್ರಮಾಣ ಪತ್ರವನ್ನು ಬ್ಯಾಂಕಿಗೆ ಸಲ್ಲಿಸಬೇಕು. ತಪ್ಪಿದ್ದಲ್ಲಿ ಅವರುಗಳ ಸೇವೆಯನ್ನು ಖಾಯಂಗೊಳಿಸಲಾಗುವುದಿಲ್ಲ.

VIII. **<u>ಅರ್ಜಿ ಸಲ್ಲಿಸುವ ವಿಧಾನ:</u>**

(1) ಅಭ್ಯರ್ಥಿಗಳು ಬ್ಯಾಂಕಿನ ಅಧಿಕೃತ ವೆಬ್‌ಸೈಟ್:www.recruit.app.com/apex2016 ಅನ್ನು ತೆರೆದ ಕೂಡಲೇ ಕಂಪ್ಯೂಟರ್ ಪರದೆಯ ಮೇಲೆ **'APEX BANK RECRUITMENT 2016'** ಎಂದು ಮೂಡುತ್ತದೆ. ಅಭ್ಯರ್ಥಿಗಳು ವಿವರಗಳನ್ನು ಮತ್ತು ಅರ್ಜಿ ಸಲ್ಲಿಸುವ ಸೂಚನೆಗಳನ್ನು ಓದಿಕೊಂಡು ಅದರಂತೆ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಅಥವಾ

ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (Help Line) 7899617837 ಅನ್ನು ಬೆಳಿಗ್ಗೆ 10.30 ಗಂಟೆಯಿಂದ ಸಂಜೆ 5.30 ಗಂಟೆವರೆಗೆ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು.

(2)ಅರ್ಜಿದಾರರು ತಮ್ಮ ಹೆಸರು ಮತ್ತು ವಿಳಾಸವನ್ನು ಅಂಚೆ ಲಕೋಟೆಯ ಮೇಲೆ ಸ್ಪಷ್ಟವಾಗಿ ನಮೂದಿಸುವುದು.

(3) ಹೈದರಾಬಾದ್-ಕರ್ನಾಟಕ ವ್ಯಾಪ್ತಿಯ ಜಿಲ್ಲೆಗಳಿಗೆ ಒಳಪಡುವ ಅಭ್ಯರ್ಥಿಗಳು ಮೀಸಲಾತಿ ಕ್ಲೈಮ್ ಮಾಡುವುದಿದ್ದಲ್ಲಿ "ಗುಮಾಸ್ತರು- ಹಾಗೂ- ನಗದು ಗುಮಾಸ್ತರು ಹುದ್ದೆಗೆ- ಹೈದರಾಬಾದ್-ಕರ್ನಾಟಕ ಮೀಸಲಾತಿ ಅರ್ಜಿ" ಎಂಬುದಾಗಿ ನಿಗದಿಪಡಿಸಿದ ಕಾಲಂ ನಲ್ಲಿ ಸ್ಪಷ್ಟವಾಗಿ ನಮೂದಿಸಬೇಕು.

(4)ಅರ್ಜಿದಾರರು ತಮ್ಮ ಅರ್ಜಿಯಲ್ಲಿ ಮೊಬೈಲ್ ಸಂಖ್ಯೆ ಇದ್ದಲ್ಲಿ ಹಾಗೂ ಈ-ಮೇಲ್ ವಿಳಾಸವಿದ್ದಲ್ಲಿ ನಮೂದಿಸತಕ್ಕದ್ದು.

## IX. <u>ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:</u>

ಅರ್ಜಿಯನ್ನು ಆನ್‌ಲೈನ್ ಮೂಲಕ **ದಿನಾಂಕ 15.12.2016ರ ಸಂಜೆ 5.30 ಗಂಟೆಯೊಳಗೆ** ಸಲ್ಲಿಸತಕ್ಕದ್ದು. ನಿಗದಿತ ಅವಧಿಯ ನಂತರ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡಿದ ಅರ್ಜಿಯ ಪ್ರತಿ, ಡಿ.ಡಿ./ಪೇ-ಆರ್ಡರ್ ಹಾಗೂ ಅಪ್‌ಲೋಡ್ ಮಾಡಿದ ಎಲ್ಲಾ ಪ್ರಮಾಣ ಪತ್ರಗಳನ್ನು ಸ್ವಯಂ ದೃಢೀಕರಿಸಿ ಮೊಹರಾದ ಲಕೋಟೆಯ ಮೇಲೆ **"ಗುಮಾಸ್ತರು-ಹಾಗೂ-ನಗದು ಗುಮಾಸ್ತರು ಹುದ್ದೆಗೆ ಅರ್ಜಿ"** ಎಂಬುದಾಗಿ ನಮೂದಿಸಿ ಹಾಗೂ ಹೈದರಾಬಾದ್-ಕರ್ನಾಟಕ ಮೀಸಲಾತಿ ಅಡಿಯಲ್ಲಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು **"ಹೈದರಾಬಾದ್-ಕರ್ನಾಟಕ ಮೀಸಲಾತಿ"** ಎಂಬುದಾಗಿಯೂ ನಮೂದಿಸಿ, ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿ ಮತ್ತು ಸದಸ್ಯ ಕಾರ್ಯದರ್ಶಿ, ನೇಮಕಾತಿ ಸಮಿತಿ, ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿಯಮಿತ, ಉತ್ತುಂಗ, ನಂ.1, ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು-560018, ಈ ವಿಳಾಸಕ್ಕೆ **ದಿನಾಂಕ 26.12.2016ರ ಸಂಜೆ 5.30 ಗಂಟೆಗೆ** ಅಂಚೆ/ಕೊರಿಯರ್ ಮೂಲಕ ಸಲ್ಲಿಸಬೇಕು. ನಿಗದಿತ ದಿನಾಂಕದ ಅವಧಿಯ ನಂತರ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಸಹಿ/-**
**ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ಮತ್ತು**
**ಸದಸ್ಯ ಕಾರ್ಯದರ್ಶಿ- ನೇಮಕಾತಿ ಸಮಿತಿ**
**ಕ.ರಾ.ಸ. ಅಪೆಕ್ಸ್ ಬ್ಯಾಂಕ್ ನಿ., ಬೆಂಗಳೂರು-18**